# **ಕರ್ನಾಟಕ ವಿಧಾನ ಪರಿಷತ್ತು**

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | **: 369** |
| ಸದಸ್ಯರ ಹೆಸರು | :ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : **21.12.2022.** |
| ಉತ್ತರಿಸುವ ಸಚಿವರು | : ಕಂದಾಯ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಸರ್ಕಾರಿ ಭೂಮಿಯಲ್ಲಿ ಮನೆ ನಿರ್ಮಿಸಿಕೊಂಡು ವಾಸಿಸುತ್ತಿರುವ ಬಡ ಜನರಿಗೆ ಭೂ-ಕಂದಾಯ 94ಸಿ ಅನ್ವಯ ಅರ್ಜಿ ಸಲ್ಲಿಸುವ ಬಗ್ಗೆ ಸೂಕ್ತ ಮಾಹಿತಿ ಇಲ್ಲದೇ, ಬಡ ಜನರು ಅರ್ಜಿಗಳನ್ನು ಸಲ್ಲಿಸುವ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ರಾಜ್ಯದ ನಗರ ಮತ್ತು ಗ್ರಾಮಾಂತರ ಪ್ರದೇಶದಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ವಾಸದ ಮನೆಗಳನ್ನು ಸಕ್ರಮಗೊಳಿಸಲು ಕ್ರಮವಾಗಿ ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 94ಸಿ ಮತ್ತು 94ಸಿಸಿ ರಡಿ ಅರ್ಜಿ ಸಲ್ಲಿಸಲು ದಿನಾಂಕ:31.03.2022ರವರೆಗೆ ಅವಕಾಶ ಕಲ್ಪಿಸಲಾಗಿದ್ದು, ಸದರಿ ಅವಧಿಯು ಮುಕ್ತಾಯವಾಗಿರುತ್ತದೆ.</td></tr>
<tr><td>ಆ)</td><td>ಹಾವೇರಿ, ಹುಬ್ಬಳ್ಳಿ-ಧಾರವಾಡ, ಗದಗ ಜಿಲ್ಲೆಗಳಲ್ಲಿ ಪ್ರಸ್ತುತ ಇಲ್ಲಿಯವರೆವಿಗೆ 94ಸಿ ಅಡಿಯಲ್ಲಿ ಸ್ವೀಕರಿಸಿರುವ ಅರ್ಜಿಗಳ ಸಂಖ್ಯೆ ಎಷ್ಟು; ಸರ್ಕಾರಿ ಗೋಮಾಳಗಳಲ್ಲಿ ನಿರ್ಮಿಸಿಕೊಂಡಿರುವ ಮನೆಗಳ ಕುರಿತು ಸ್ವೀಕೃತವಾದ ಅರ್ಜಿಗಳೆಷ್ಟು;</td><td>ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 94ಸಿ ರಡಿ ಸ್ವೀಕರಿಸಿದ ಅರ್ಜಿಗಳ ವಿವರ ಈ ಕೆಳಕಂಡಂತಿದೆ;-
<table>
<tr><th>ಕ್ರ. ಸಂ</th><th>ಜಿಲ್ಲೆಯ ಹೆಸರು</th><th>ಸ್ವೀಕೃತ ಅರ್ಜಿಗಳ ಸಂಖ್ಯೆ</th><th>ಗೋಮಾಳದಲ್ಲಿ ಮನೆ ನಿರ್ಮಿಸಿಕೊಂಡು ಸ್ವೀಕೃತವಾಗಿರುವ ಅರ್ಜಿ</th></tr>
<tr><td>1</td><td>ಹಾವೇರಿ</td><td>5875</td><td>1076</td></tr>
<tr><td>2</td><td>ಧಾರವಾಡ</td><td>15511</td><td>2607</td></tr>
<tr><td>3</td><td>ಗದಗ</td><td>1833</td><td>176</td></tr>
</table></td></tr>
<tr><td>ಇ)</td><td>ಸರ್ಕಾರಿ ಗೋಮಾಳದಲ್ಲಿ ಮನೆ ನಿರ್ಮಿಸಿಕೊಂಡು ಬಹಳ ವರ್ಷಗಳಿಂದ ವಾಸಿಸುತ್ತಿರುವ ಬಡಜನರಿಗೆ 94ಸಿ ನಿಯಮದಡಿ ಹಕ್ಕುಪತ್ರ ನೀಡಲು ಅನುಕೂಲ ವಾಗುವಂತೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು?</td><td>ಗ್ರಾಮೀಣ ಪ್ರದೇಶದಲ್ಲಿ ಸರ್ಕಾರಿ ಜಮೀನಿನಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ವಾಸದ ಮನೆಗಳನ್ನು ಸಕ್ರಮಗೊಳಿಸುವ ಸಲುವಾಗಿ ಅರ್ಜಿ ಸಲ್ಲಿಸಲು ದಿನಾಂಕ:31.03.2022ರವರೆಗೆ ಅವಕಾಶ ಕಲ್ಪಿಸಲಾಗಿತ್ತು. ಸದರಿ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ, ಅರ್ಹ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಿಸಲು ದಿನಾಂಕ:30.03.2023ರವರೆಗೆ ಅವಕಾಶ ಕಲ್ಪಿಸಲಾಗಿದೆ.</td></tr>
</table>

ಸಂಖ್ಯೆ: ಆರ್‌ಡಿ 260 ಎಲ್‌ಜಿಕ್ಯೂ 2022

**(ಆರ್.ಅಶೋಕ)**
ಕಂದಾಯ ಸಚಿವರು